FEBRUARY 22, 2026

ALL INDIA RADIO- DHARWAD

PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ನೇಮಕಾತಿ ಹಾಗೂ ವರ್ಗಾವಣೆಗಳಲ್ಲಿ ಭ್ರ ಷ್ಟಾಚಾರ ತಡೆಯುವುದು ಸರ್ಕಾರದ ಆಶಯ–ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ.

- ರಾಜ್ಯದ ಅಲೆಮಾರಿ, ಅರೆ ಅಲೆಮಾರಿ ಜನಾಂಗದವರ ಬೆಳವಣಿಗೆಗೆ ಸರ್ಕಾರದಿಂದ ಪ್ರಾಮಾಣಿಕ ಪ್ರಯತ್ನ–ಕಾರ್ಮಿಕ ಸಚಿವರಿಂದ ಭರವಸೆ.

- ಮುಂಬರುವ ಬಜೆಟ್‌ನಲ್ಲಿ ವಿಶ್ವವಿದ್ಯಾಲಯಗಳ ಅಭಿವೃದ್ಧಿಗೆ ಪೂರಕವಾದ ಯೋಜನೆಗಳನ್ನು ಅಳವಡಿಸುವಂತೆ ಮುಖ್ಯಮಂತ್ರಿ ಅವರಿಗೆ ರಾಜ್ಯಪಾಲರ ಮನವಿ.

- ಆಕಾಶವಾಣಿಯ ಮನ್ ಕಿ ಬಾತ ಕಾರ್ಯಕ್ರಮದ ಮೂಲಕ ಇಂದು ಬೆಳಿಗ್ಗೆ 11 ಕ್ಕೆ ಮನದ ಮಾತು ಹಂಚಿಕೊಳ್ಳಲಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಿ.

ಈಗ ವಾರ್ತೆಗಳ ವಿವರ

*******

ನೇಮಕಾತಿ ಹಾಗೂ ವರ್ಗಾವಣೆಗಳಲ್ಲಿ ಭ್ರ ಷ್ಟಾಚಾರ ತಡೆಯುವುದು ಸರ್ಕಾರದ ಆಶಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಆರೋಗ್ಯ ಇಲಾಖೆ ವತಿಯಿಂದ ಬೆಂಗಳೂರಿನಲ್ಲಿ ಆಯೋಜಿಸಿದ್ದ ಅಭಯ ಹಸ್ತ ಮತ್ತು ನೇಮಕಾತಿ ಆದೇಶ ವಿತರಣಾ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಪ್ರಸ್ತುತ ನಡೆದಿರುವ ಎಲ್ಲ ನೇಮಕಾತಿಗಳನ್ನು ಕೌನ್ಸೆಲಿಂಗ್ ಮೂಲಕ ಮಾಡುತ್ತಿದ್ದು, ಭ್ರ ಷ್ಟಾಚಾರ ತಡೆಯಲು ಸಾಧ್ಯವಾಗುತ್ತಿದೆ. ವೈದ್ಯರೂ ಸೇರಿದಂತೆ 5700 ಹುದ್ದೆಗಳನ್ನು ಕೌನ್ಸೆಲಿಂಗ್ ಮೂಲಕ ವರ್ಗಾವಣೆ ಮಾಡಲಾಗಿದೆ ಎಂದರು. ಸಮಾಜದ ಸ್ವಾಸ್ಥ್ಯ ಕಾಪಾಡುವ ಶಿಕ್ಷಣ, ಆರೋಗ್ಯ, ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಸರ್ಕಾರ ಆದ್ಯತೆ ನೀಡುತ್ತದೆ. ಎಂದು ಮುಖ್ಯಮಂತ್ರಿ ಹೇಳಿದರು.

*******

ರಾಜ್ಯದ ಅಲೆಮಾರಿ, ಅರೆ ಅಲೆಮಾರಿ ಜನಾಂಗದವರ ಬೆಳವಣಿಗೆಗೆ ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ ಹೇಳಿದ್ದಾರೆ. ರಾಜ್ಯ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದ ಒಕ್ಕೂಟದಿಂದ ಹುಬ್ಬಳ್ಳಿಯಲ್ಲಿ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಮತ್ತು ಸಾಹಿತ್ಯ ಸಾಂಸ್ಕೃತಿಕ ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರಲ್ಲಿ ಸುಮಾರು 42 ಪಂಗಡಗಳಿವೆ. ಅಂಬೇಡ್ಕರ್ ಕಾರ್ಮಿಕ ಸಹಾಯಹಸ್ತ ಯೋಜನೆಯಡಿ 102 ಪಂಗಡಗಳನ್ನು ಗುರುತಿಸಲಾಗಿದೆ. ಈ ಪಂಗಡಗಳ ಅಭಿವೃದ್ಧಿಗೆ ಕಾರ್ಯಕ್ರಮ ರೂಪಿಸಲಾಗುವುದು ಎಂದು ಸಚಿವರು ಹೇಳಿದರು.

*******

ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅಭಿವೃದ್ಧಿ ಯೋಜನೆಯ ಕರಡು ಸಿದ್ಧಪಡಿಸಲು ಪ್ರತಿಯೊಂದು ಜಿಲ್ಲೆಗೂ ಒಂದೊಂದು ಜಿಲ್ಲಾ ಯೋಜನಾ ಸಮಿತಿ ರಚಿಸಲಾಗುವುದು ಎಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದ್ದಾರೆ. ಮಂಡ್ಯ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಏರ್ಪಡಿಸಿದ್ದ ಜಿಲ್ಲಾ ಯೋಜನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 310 ರಡಿ ಜಿಲ್ಲಾ ಪಂಚಾಯತಿಗಳು, ತಾಲ್ಲೂಕು, ಗ್ರಾಮ, ಹಾಗೂ ಪಟ್ಟಣ ಪಂಚಾಯತಿಗಳು, ಜಿಲ್ಲೆಯಲ್ಲಿರುವ ಪುರಸಭಾ ಮತ್ತು ನಗರ ಸಭಾ ನಿಗಮಗಳ ಯೋಜನೆಗಳನ್ನು ಕ್ರೋಡಿಕರಿಸಲು ಮತ್ತು ಒಟ್ಟಾರೆ ಜಿಲ್ಲೆಯ ಅಭಿವೃದ್ಧಿಗಾಗಿ ಯೋಜನೆಯ ಕರಡು ಸಿದ್ಧಪಡಿಸಲು ಪ್ರತಿಯೊಂದು ಜಿಲ್ಲೆಗೂ ಒಂದೊಂದು ಜಿಲ್ಲಾ ಯೋಜನಾ ಸಮಿತಿ ರಚಿಸಲಾಗುವುದು ಎಂದು ಅವರು ಹೇಳಿದರು.

*******

ಶಿವಮೊಗ್ಗ ಜಿಲ್ಲೆ ಚಂದ್ರಗುತ್ತಿ ದೇವಾಲಯದ ಸಮಗ್ರ ಅಭಿವೃದ್ಧಿಗೆ ಅಗತ್ಯ ಅನುದಾನ ನೀಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ಭರವಸೆ ನೀಡಿದ್ದಾರೆ. ಚಂದ್ರಗುತ್ತಿ ರೇಣುಕಾಂಬ ದೇವಾಲಯದ ಮೂಲಭೂತ ಸೌಕರ್ಯದ ವಿವಿಧ ಕಾಮಗಾರಿಗಳ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಜನವರಿ ತಿಂಗಳಲ್ಲಿ ಚಂದ್ರಗುತ್ತಿ ದೇವಾಲಯ ಅಭಿವೃದ್ಧಿ ಪ್ರಾಧಿಕಾರ ರಚನೆಯಾಗಿದ್ದು, ಇದರಿಂದಾಗಿ ದೇವಾಲಯದ ಸಮಗ್ರ ಅಭಿವೃದ್ಧಿ ಸಾಧ್ಯವಾಗಲಿದೆ. ಜಿಲ್ಲೆಯಲ್ಲಿ ಗುಡವಿ, ಕೋಟಿಪುರ, ಚಂದ್ರಗುತ್ತಿ, ಬಂಗಾರಧಾಮ, ಬನವಾಸಿ ಸೇರಿದಂತೆ 64 ಪ್ರವಾಸಿ ತಾಣಗಳಿದ್ದು, ಪ್ರವಾಸೋದ್ಯಮಕ್ಕೆ ಉತ್ತಮ ಅವಕಾಶಗಳಿವೆ ಎಂದು ಸಚಿವರು ಹೇಳಿದರು.

*******

ವಿಶ್ವವಿದ್ಯಾಲಯಗಳು ಯಾವುದೇ ಆದಾಯ ಹೊಂದಿಲ್ಲದ ಕಾರಣ, ಅವುಗಳ ಬಗ್ಗೆ ವಿಶೇ ' ಕಾಳಜಿ ವಹಿಸಿ, ಮುಂಬರುವ ಬಜೆಟ್‌ನಲ್ಲಿ ಉನ್ನತ ಶಿಕ್ಷಣ ಇಲಾಖೆಗೆ ಹೆಚ್ಚು ಪ್ರಯೋಜನಕಾರಿಯಾಗುವಂತೆ ಬಜೆಟ್ ಮಂಡಿಸಬೇಕು" ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸೂಚಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ರಾಜ್ಯ ಸಾರ್ವಜನಿಕ ವಿಶ್ವವಿದ್ಯಾಲಯಗಳ ಕುಲಪತಿಗಳ ಸಮ್ಮೇಳನ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಸಂಗೀತ ವಿಶ್ವವಿದ್ಯಾಲಯ, ಸಂಸ್ಕೃತ, ಹಂಪಿ, ಜನಪದ ವಿಶ್ವವಿದ್ಯಾಲಯ, ಡಾ.

ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಬೇಕು ಎಂದರು. ವಿಶ್ವವಿದ್ಯಾಲಯಗಳನ್ನು ಅಭಿವೃದ್ಧಿಪಡಿಸಲು ಕುಲಪತಿಗಳು ಮತ್ತು ಕುಲಸಚಿವರ ನಡುವೆ ಉತ್ತಮ ಸಮನ್ವಯದ ಅವಶ್ಯಕತೆಯಿದೆ. ಶೈಕ್ಷಣಿಕ ಸಿಬ್ಬಂದಿಯನ್ನು ಸಕಾಲಿಕವಾಗಿ ಮೇಲ್ದರ್ಜೆಗೇರಿಸುವ ಅಗತ್ಯವಿದೆ. ಪ್ರಸ್ತುತ ಅವಶ್ಯಕತೆಗಳಿಗೆ ಅನುಗುಣವಾಗಿ ವಿಶ್ವವಿದ್ಯಾಲಯಗಳ ಪಠ್ಯಕ್ರಮವನ್ನು ನವೀಕರಿಸುವುದು ಅಗತ್ಯ ಎಂದು ಅವರು ಅಭಿಪ್ರಾಯಪಟ್ಟರು.

*******

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ–42 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಆಕಾಶವಾಣಿಯ 'ಮನ್ ಕಿ ಬಾತ್' ಕಾರ್ಯಕ್ರಮದ ಮೂಲಕ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಇಂದು ಬೆಳಗ್ಗೆ 11 ಗಂಟೆಗೆ ದೇಶವಾಸಿಗಳೊಂದಿಗೆ ತಮ್ಮ ಮನದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ 131ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಈ ಕಾರ್ಯಕ್ರಮವನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಆಯಾ ಪ್ರಾದೇಶಿಕ ಭಾ ೆಗಳಲ್ಲಿ ಕಾರ್ಯಕ್ರಮ ಮರು ಪ್ರಸಾರವಾಗಲಿದೆ.

*******

ಬೆಂಗಳೂರಿನ ರಂಗಶಂಕರ ಸಹಯೋಗದಲ್ಲಿ ಕಲಬುರಗಿ ಜಿಲ್ಲಾಡಳಿತದ ವತಿಯಿಂದ ಆಯೋಜಿಸಿರುವ 8 ದಿನಗಳ ರಾಷ್ಟ್ರೀಯ ನಾಟಕೋತ್ಸವಕ್ಕೆ ನಿನ್ನೆ ಸಂಭ್ರಮದ ಚಾಲನೆ ದೊರಕಿತು. ಉತ್ಸವದಲ್ಲಿ ಕನ್ನಡ ಸೇರಿದಂತೆ ಬೇರೆ ಬೇರೆ ಭಾ ೆಯ ಪ್ರಸಿದ್ಧ ನಾಟಕಗಳು ಪ್ರದರ್ಶನಗೊಳ್ಳಲಿದೆ. ಪ್ರಾದೇಶಿಕ ಕಲಾ ಪ್ರಕಾರಗಳನ್ನು ಮತ್ತು ಕಲಾವಿದರನ್ನು ಗುರುತಿಸಿ, ಅವರಿಗೆ ಬೆಂಬಲ ನೀಡುವ ಮೂಲಕ ಸ್ಥಳೀಯ ರಂಗಭೂಮಿ ವ್ಯವಸ್ಥೆಯನ್ನು ಬಲಪಡಿಸುವುದು ಮತ್ತು ಸಮೃದ್ಧಗೊಳಿಸುವುದು ಈ ರಂಗೋತ್ಸವದ ಪ್ರಮುಖ ಆಶಯವಾಗಿದೆ. ಫೆಬ್ರವರಿ 28 ರವರೆಗೆ ನಾಟಕೋತ್ಸವ ನಡೆಯಲಿದ್ದು, ನಾಟಕೋತ್ಸವದ ವಿಶೇ ತೆಗಳ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಕಲಬುರಗಿ ರಂಗಾಯಣದ ನಿರ್ದೇಶಕಿ ಡಾಕ್ಟರ ಸುಜಾತಾ ಜಂಗಮಶೆಟ್ಟಿ ಅವರು.

ಧ್ವನಿ–ಡಾ.ಸುಜಾತಾ ಜಂಗಮಶೆಟ್ಟಿ–27 ಸೆಕೆಂಡ್

*******

ಕಾಡಂಚಿನ ಗ್ರಾಮಗಳಲ್ಲಿ ಮನು ್ಯರ ಮೇಲೆ ಕಾಡು ಪ್ರಾಣಿಗಳ ದಾಳಿಯ ಮುನ್ನೆಚ್ಚರಿಕೆ ಕ್ರಮವಾಗಿ ಬಂದ್ ಆಗಿದ್ದ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ವನ್ಯಜೀವಿ ಸಫಾರಿ ಇಂದಿನಿಂದ ಮತ್ತೇ ಆರಂಭಗೊಳ್ಳಲಿದೆ. ಈ ಕುರಿತು ಪ್ರಧಾನ ಆದೇಶ ಹೊರಡಿಸಿರುವ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಮುಖ್ಯ ವನ್ಯಜೀವಿ ಪರಿಪಾಲಕ ಕುಮಾರ್ ಪು ್ಕರ್, ಬೆಳಗ್ಗೆ ಮತ್ತು ಸಂಜೆ ಸಫಾರಿಗೆ ಎರಡೂವರೆ ತಾಸು ನಿಗದಿ ಮಾಡಲಾಗಿದ್ದು ಅರಣ್ಯ ಇಲಾಖೆಯ 19 ವಾಹನಗಳು ಮತ್ತು ಜಂಗಲ್ ಲಾಡ್ಜ್ ನ 12 ವಾಹನಗಳಲ್ಲಿ ಶೇ. 50 ರ ್ಟು ಬಳಸುವಂತೆ ಉಳಿದ ವಾಹನಗಳನ್ನು ಮಾನವ ಮತ್ತು ವನ್ಯಜೀವಿ ಸಂಘ ್ ತಡೆಗೆ ಉಪಯೋಗಿಸಬೇಕು, ಎನ್ ಟಿಸಿಯ ನಿಯಮ ಪಾಲನೆ, ಎರಡು ತಿಂಗಳೊಳಗೆ ಎಲ್ಲಾ ಸಫಾರಿ ವಾಹನಗಳಿಗೆ ಎಂಜಿನ್ ಸಂಪರ್ಕಿತ ಜಿಪಿಎಸ್ ಟ್ರಾಕರ್‌ಗಳು, ಡ್ಯಾಶ್ ಕ್ಯಾಮ್ ಅಳವಡಿಸಬೇಕು ಎಂದು ಅವರು ರತ್ತು ವಿಧಿಸಿ ಆದೇಶ ಹೊರಡಿಸಿದ್ದಾರೆ.

*******

ವಿದ್ಯುತ್ ಸರಬರಾಜು ಕಂಪನಿಗಳ ನಷ್ಟ ಸರಿದೂಗಿಸಲು ದರ ಹೆಚ್ಚಳ ಪ್ರಸ್ತಾವನೆಗೆ ಹುಬ್ಬಳ್ಳಿ ವಾಣಿಜ್ಯೋದ್ಯಮ ಸಂಸ್ಥೆ ವಿರೋಧ ವ್ಯಕ್ತಪಡಿಸಿದೆ. ಈ ಕುರಿತು ಪ್ರಕಟಣೆ ಬಿಡುಗಡೆ ಮಾಡಿರುವ ಸಂಸ್ಥೆಯ ಅಧ್ಯಕ್ಷ ಜಿ. ಕೆ. ಆದಪ್ಪಗೌಡರ, ಏಪ್ರಿಲ್ 1 ರಿಂದ ಜಾರಿಗೆ ಬರುವಂತೆ ಪ್ರತಿ ಯುನಿಟ್ ವಿದ್ಯುತ್ ಬೆಲೆ ಸರಾಸರಿ 12 ರಿಂದ 15 ಪೈಸೆ ಹೆಚ್ಚಳವಾಗುವ ಸಾಧ್ಯತೆ ಇದೆ. ವಿದ್ಯುತ್ ದರ ಏರಿಕೆ ಮಾಡುವುದು ಉದ್ಯಮ ವಲಯದ ಮೇಲೆ ಮತ್ತ ್ಟು ಭಾರ ಹಾಕುವ ಕ್ರಮವಾಗಿದೆ. ಉತ್ತರ ಕರ್ನಾಟಕ ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಕೈಗಾರಿಕಾ ಅಭಿವೃದ್ಧಿಗೆ ಉತ್ತೇಜನ ನೀಡಬೇಕಾದ ಸಂದರ್ಭದಲ್ಲಿ ಸಣ್ಣ ಕೈಗಾರಿಕೆಗಳು ಹಾಗೂ ಸ್ಟಾರ್ಟ್‌ಅಪ್ ಘಟಕಗಳು ಉತ್ಪಾದನಾ ವೆಚ್ಚ ಹೆಚ್ಚಳದಿಂದ ಸ್ಪರ್ಧಾತ್ಮಕತೆಯನ್ನು ಕಳೆದುಕೊಳ್ಳುವ ಅಪಾಯವಿದೆ. ಇದರಿಂದ ಉದ್ಯೋಗಾವಕಾಶಗಳ ಮೇಲೂ ಪ್ರತಿಕೂಲ ಪರಿಣಾಮ ಬೀರಬಹುದು ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

*******

ಇದೇ 28 ರಿಂದ ಮಾರ್ಚ 17 ರವರೆಗೆ ನಡೆಯಲಿರುವ ದ್ವಿತೀಯ ಪಿಯುಸಿ ಪರೀಕ್ಷೆಯನ್ನು ಸುಗಮವಾಗಿ ನಡೆಸಲು ಎಲ್ಲ ರೀತಿಯ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಧಾರವಾಡ ಜಿಲ್ಲಾಧಿಕಾರಿ ಸ್ನೇಹಲ್ ಆರ್., ತಿಳಿಸಿದ್ದಾರೆ. ಪಿಯುಸಿ ವಾರ್ಷಿಕ ಪರೀಕ್ಷಾ ಸಿದ್ಧತೆ ಕುರಿತು ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ನಡೆಸಿದ ಅವರು ಪ್ರಸಕ್ತ ಸಾಲಿನಲ್ಲಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ 12,665 ಪುರುಷ ಹಾಗೂ 14,289 ಮಹಿಳಾ ವಿದ್ಯಾರ್ಥಿಗಳು ಸೇರಿ ಒಟ್ಟು 26,954 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ ಎಂದರು. ಜಿಲ್ಲೆಯಲ್ಲಿ ಒಟ್ಟು 43 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ನೇಮಕಾತಿ ಹಾಗೂ ವರ್ಗಾವಣೆಗಳಲ್ಲಿ ಭ್ರ ್ಟಾಚಾರ ತಡೆಯುವುದು ಸರ್ಕಾರದ ಆಶಯ–ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ.

ರಾಜ್ಯದ ಅಲೆಮಾರಿ, ಅರೆ ಅಲೆಮಾರಿ ಜನಾಂಗದವರ ಬೆಳವಣಿಗೆಗೆ ಸರ್ಕಾರದಿಂದ ಪ್ರಾಮಾಣಿಕ ಪ್ರಯತ್ನ–ಕಾರ್ಮಿಕ ಸಚಿವರಿಂದ ಭರವಸೆ.

ಮುಂಬರುವ ಬಜೆಟ್‌ನಲ್ಲಿ ವಿಶ್ವವಿದ್ಯಾಲಯಗಳ ಅಭಿವೃದ್ಧಿಗೆ ಪೂರಕವಾದ ಯೋಜನೆಗಳನ್ನು ಅಳವಡಿಸುವಂತೆ ಮುಖ್ಯಮಂತ್ರಿ ಅವರಿಗೆ ರಾಜ್ಯಪಾಲರ ಮನವಿ.

ಆಕಾಶವಾಣಿಯ ಮನ್ ಕಿ ಬಾತ ಕಾರ್ಯಕ್ರಮದ ಮೂಲಕ ಇಂದು ಬೆಳಿಗ್ಗೆ 11 ಕ್ಕೆ ಮನದ ಮಾತು ಹಂಚಿಕೊಳ್ಳಲಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಿ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********